# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ. ಹೆಚ್. ರಸ್ತೆ, ತುಮಕೂರು-572 103

ಸಂಖ್ಯೆ: ತುವಿ: ಡಿಇವಿ-02:2022-23/ H/08 ದಿನಾಂಕ:28.11.2022

**ಸುತ್ತೋಲೆ**

ವಿಷಯ: ವಿಶ್ವವಿದ್ಯಾನಿಲಯದ ಅಂತರ್-ವಿಭಾಗಗಳ ಸಾಂಸ್ಕೃತಿಕ ಸ್ಪರ್ಧೆಗಳಲ್ಲಿ ಭಾಗವಹಿಸುವ ಕುರಿತು.

ಉಲ್ಲೇಖ: 1. ಡಾ. ರಮೇಶ್ ಬಿ., ನಿರ್ದೇಶಕರು, ಐಕ್ಯೂಎಸಿ ಇವರ ಪತ್ರ ದಿನಾಂಕ:22.11.2022

2. ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ:28.11.2022

* * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ತುಮಕೂರು ವಿಶ್ವವಿದ್ಯಾನಿಲಯದ ಅಂತರ್ ವಿಭಾಗಗಳ ಸಾಂಸ್ಕೃತಿಕ ಸ್ಪರ್ಧೆಗಳನ್ನು ದಿನಾಂಕ:29.11.2022 ರಂದು ಆಯೋಜಿಸಲಾಗಿದ್ದು, ಬೆಳಿಗ್ಗೆ 10.30ಕ್ಕೆ ಡಾ. ಸದಾನಂದಮಯ್ಯ ಕಟ್ಟಡದ 2ನೇ ಮಹಡಿಯ ಸೆಮಿನಾರ್ ಹಾಲ್‌ನಲ್ಲಿ ಉದ್ಘಾಟನಾ ಸಮಾರಂಭವನ್ನು ಆಯೋಜಿಸಲಾಗಿದೆ. ಈ ಸಂಬಂಧ ಸದರಿ ದಿನದಂದು ವಿವಿಧ ವಿಭಾಗಗಳಿಂದ ಸ್ಪರ್ಧೆಯಲ್ಲಿ ಭಾಗವಹಿಸುತ್ತಿರುವ ಸ್ಪರ್ಧಿಗಳು ಬೆಳಿಗ್ಗೆ 10.00 ಗಂಟೆಗೆ ಆಗಮಿಸಿ ನೊಂದಣಿ ಮಾಡಿಸಿಕೊಳ್ಳಬೇಕಾಗಿ ತಿಳಿಸಲಾಗಿದೆ. ಸದರಿ ದಿನಾಂಕದಂದು ಸ್ನಾತಕೋತ್ತರ ಅಧ್ಯಯನ ವಿಭಾಗಗಳ ತರಗತಿಗಳು ನಡೆಯುವುದಿಲ್ಲ. ಎಲ್ಲಾ ಸ್ನಾತಕೋತ್ತರ ವಿದ್ಯಾರ್ಥಿಗಳು, ವಿಭಾಗಗಳ ಮುಖ್ಯಸ್ಥರು, ವಿವಿಧ ಸಮಿತಿಗಳ ಅಧ್ಯಕ್ಷರು, ಸಂಚಾಲಕರು ಹಾಗೂ ಸದಸ್ಯರುಗಳು ಮತ್ತು ಪೂರ್ಣಕಾಲಿಕ ಸಂಶೋಧನಾ ವಿದ್ಯಾರ್ಥಿಗಳು ಉದ್ಘಾಟನಾ ಮತ್ತು ಸ್ಪರ್ಧಾ ಸಮಾರಂಭಗಳಲ್ಲಿ ಭಾಗವಹಿಸುವಂತೆ ತಿಳಿಸಲಾಗಿದೆ. ಅದೇ ದಿನ ಸಂಜೆ 4.00 ಗಂಟೆಗೆ ಸಮಾರೋಪ ಸಮಾರಂಭದಲ್ಲಿ ವಿಜೇತರಿಗೆ ಪ್ರಶಸ್ತಿ ಪತ್ರಗಳನ್ನು ವಿತರಿಸಲಾಗುವುದು.

ಆದೇಶದ ಮೇರೆಗೆ

D. S... 28/11/2022

ಉಪಕುಲಸಚಿವರು

ಉಪಕುಲಸಚಿವರು

(ಸಾಮಾನ್ಯ ವಿಭಾಗ)

ತುಮಕೂರು ವಿಶ್ವವಿದ್ಯಾನಿಲಯ

ತುಮಕೂರು

ಗೆ,

1. ಅಧ್ಯಕ್ಷರು/ಸಂಯೋಜಕರು, ಎಲ್ಲಾ ಸ್ನಾತಕೋತ್ತರ ಅಧ್ಯಯನ ವಿಭಾಗಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಸಂಯೋಜಕರು, ಶಿರಾ ಸ್ನಾತಕೋತ್ತರ ಕೇಂದ್ರ, ಶಿರಾ.
3. ಸಂಯೋಜಕರು, ತಿಪಟೂರು ಸ್ನಾತಕೋತ್ತರ ಕೇಂದ್ರ, ತಿಪಟೂರು.
4. ಡಾ. ರಮೇಶ್ ಬಿ., ನಿರ್ದೇಶಕರು, ಐಕ್ಯೂಎಸಿ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.

ಪ್ರತಿಗಳು:

1. ಕಾರ್ಯಪಾಲಕ ಅಭಿಯಂತರರು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಸಿಸ್ಟಮ್ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು-(ವಿವಿ ಜಾಲತಾಣದಲ್ಲಿ ಭಿತ್ತರಿಸುವಂತೆ ಹಾಗೂ ಎಲ್ಲಾ ಬೋಧಕೇತರ ಸಿಬ್ಬಂದಿಗಳಿಗೆ ಸಂದೇಶವನ್ನು ಕಳುಹಿಸುವಂತೆ ಸೂಚಿಸಿದೆ)
3. ವಿಶೇಷ ಕಾರ್ಯದರ್ಶಿಗಳು, ಮಾನ್ಯ ಕುಲಪತಿಗಳ ಕಾರ್ಯಾಲಯ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
4. ಮಾನ್ಯ ಕುಲಸಚಿವರ ಆಪ್ತ ಸಹಾಯಕರು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
5. ಕಚೇರಿ ಪ್ರತಿ.